# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1489 (1778)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಒದಗಿಸಿದ ಅನುದಾನ

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿನ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಿಗೆ ರಾಜ್ಯದ ಆಯವ್ಯಯಗಳಲ್ಲಿ ರಾಜ್ಯ ಮತ್ತು ಜಿಲ್ಲಾ ವಲಯಗಳಲ್ಲಿ ಹಂಚಿಕೆ ಮಾಡಲಾದ ಅನುದಾನದ ಮೊತ್ತವೆಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ಈ ಅನುದಾನಗಳಡಿಯಲ್ಲಿ ಬರುವ ಇಲಾಖೆಗಳು ಕೈಗೊಂಡಿರುವ ಯೋಜನೆಗಳೆಷ್ಟು ; (ವಿವರ ನೀಡುವುದು)

(ಇ) ಮೇಲಿನ ವಲಯಗಳಲ್ಲಿ ವಿಶೇಷ ಘಟಕ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆ ಅಡಿಯಲ್ಲಿ ಹಂಚಿಕೆ ಆಗಿರುವ ಅನುದಾನವೆಷ್ಟು; ಹೀಗೆ ಹಂಚಿಕೆ ಆಗಿರುವ ಅನುದಾನಗಳು ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಕಾಯ್ದೆ ಅನ್ವಯ ಇರುತ್ತವೆಯೇ; (ವಿವರ ನೀಡುವುದು)

(ಈ) ಮೇಲಿನ ವಲಯಗಳಲ್ಲಿ ವರ್ಗ-ಎ ಮತ್ತು ವರ್ಗ-ಬಿ ಅಡಿ ಮಹಿಳಾ ಘಟಕ ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಹಂಚಿಕೆ ಆಗಿರುವ ಅನುದಾನವೆಷ್ಟು ? (ವಿವರ ನೀಡುವುದು)